ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಡಾ: ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1029(1103) |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 16-12-2025 |

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿಯಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ಹಾಗೂ ಎಷ್ಟು ಅನುದಾನದಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್ ಸ್ಥಾಪಿಸಲು ಉದ್ದೇಶಿಸಲಾಗಿದೆ; | ➢ ಕಲಬುರಗಿ ಜಿಲ್ಲೆಯಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಪಿಎಂ-ಮಿತ್ರ ಮೆಗಾ ಜವಳಿ ಪಾರ್ಕ್ 1000 ಎಕರೆ ಪ್ರದೇಶದಲ್ಲಿ ಸ್ಥಾಪಿಸಲಾಗುತ್ತಿದೆ.<br>➢ ರಾಜ್ಯ ಸರ್ಕಾರದಿಂದ ಸದರಿ ಪಾರ್ಕ್‌ನ ಗೇಟ್‌ನವರೆಗೆ ಅಭಿವೃದ್ಧಿಪಡಿಸಲು ಮೂಲಭೂತ ಸೌಕರ್ಯಗಳಾದ ರಸ್ತೆ, ಚರಂಡಿ, ಪವರ್ ಸ್ಟೇಷನ್, ಬ್ಯಾರೇಜ್ ನಿರ್ಮಾಣ ಮತ್ತು ಪೈಪ್‌ಲೈನ್ ಕಾಮಗಾರಿಗಳಿಗಾಗಿ ರೂ.390.26 ಕೋಟಿಗಳನ್ನು ಮಂಜೂರು ಮಾಡಲಾಗಿದೆ.<br>➢ PM-MITRA ಪಾರ್ಕ್‌ನ್ನು ಅನುಷ್ಠಾನಗೊಳಿಸಲು ಯೋಜನಾ ಮೊತ್ತ ರೂ.1826.00 ಕೋಟಿಗಳನ್ನು ಅಂದಾಜಿಸಲಾಗಿರುತ್ತದೆ. ಸದರಿ ಮೊತ್ತವನ್ನು Master Developer ರವರು ಹೂಡಿಕೆ ಮಾಡಿ ಪಾರ್ಕ್‌ನ ಅಭಿವೃದ್ಧಿಪಡಿಸಿದ ನಂತರ ಕೇಂದ್ರ ಸರ್ಕಾರದಿಂದ ರೂ.500.00 ಕೋಟಿಗಳನ್ನು ಯೋಜನೆಯ ಮಾರ್ಗಸೂಚಿಯಂತೆ 02 ಹಂತಗಳಲ್ಲಿ ಒದಗಿಸಲಾಗುವುದು. |
| (ಆ) | ಸದರಿ ಯೋಜನೆಗೆ ಯಾವ ಸ್ಥಳವನ್ನು ಆಯ್ಕೆ ಮಾಡಲಾಗಿದೆ ಹಾಗೂ ಯೋಜನೆಗೆ ಪೂರಕವಾದ ಮೂಲ ಸೌಕರ್ಯಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ವತಿಯಿಂದ ಈಗಾಗಲೇ ಎಷ್ಟು ಅನುದಾನ ಒದಗಿಸಲಾಗಿದೆ; | ➢ ಕಲಬುರಗಿ ಜಿಲ್ಲೆಯಲ್ಲಿ, ಕಲಬುರಗಿ ತಾಲ್ಲೂಕಿನ ಫರತಬಾದ್ ಹೋಬಳಿ ಹೊನ್ನಕಿರಣಗಿಯ ಮತ್ತು ನದಿಸಿನ್ನೂರು ಗ್ರಾಮದ ವಿವಿಧ ಸರ್ವೆ ನಂಬರ್ ಗಳಲ್ಲಿ ಒಟ್ಟು 1000 ಎಕರೆ ಭೂ-ಪ್ರದೇಶವನ್ನು ಪಿಎಂ-ಮಿತ್ರ ಮೆಗಾ ಜವಳಿ ಪಾರ್ಕ್ ಸ್ಥಾಪಿಸಲು ನಿಗಧಿಪಡಿಸಲಾಗಿರುತ್ತದೆ.<br>➢ ಮೂಲ ಸೌಕರ್ಯಕ್ಕಾಗಿ ರಾಜ್ಯ ಸರ್ಕಾರದಿಂದ ರೂ.390.26 ಕೋಟಿಗಳಿಗೆ ಅನುಮೋದನೆ ನೀಡಲಾಗಿದ್ದು, 2024-25ನೇ ಸಾಲಿಗೆ ಕೆಕೆಆರ್‌ಡಿಬಿಯಿಂದ ರೂ.50.90 ಕೋಟಿಗಳನ್ನು ವಿವಿಧ ಅನುಷ್ಠಾನ ಇಲಾಖೆಗಳಿಗೆ ಹಂಚಿಕೆ ಮಾಡಲಾಗಿರುತ್ತದೆ. |
| (ಇ) | ಈ ಯೋಜನೆಯ ಅನುಷ್ಠಾನ ವನ್ನು ಯಾವ ಕಾಲಮಿತಿಯೊಳಗೆ ಪೂರ್ಣ ಗೊಳಿಸಲಾಗುವುದು ಮತ್ತು ಜಿಲ್ಲೆಯಲ್ಲಿ ಎಷ್ಟು ಉದ್ಯೋಗಗಳು ಸೃಜನೆ ಯಾಗುವ ನಿರೀಕ್ಷೆಯಿದೆ? (ವಿವರ ನೀಡುವುದು); | ಜವಳಿ ಪಾರ್ಕ್‌ನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ DBFOT (Design, Build, Finance, Operate and Transfer) ಮಾದರಿಯಲ್ಲಿ ಸ್ಥಾಪಿಸಲು Master Developer ಆಯ್ಕೆಗಾಗಿ ಸಿದ್ಧಪಡಿಸಿರುವ RFP (Request for Proposal) ಮತ್ತು DCA (Draft Concession Agreement) ಗಳನ್ನು ರಾಜ್ಯ ಕಾನೂನು ಇಲಾಖೆಯ ಅನುಮೋದನೆಯೊಂದಿಗೆ ಜವಳಿ ಮಂತ್ರಾಲಯ, ಭಾರತ ಸರ್ಕಾರ, National Industrial Corridor Development Corporation (NICDC) ನಿಗಮಕ್ಕೆ ದಿನಾಂಕ:11-07-2025 ರಂದು ಸಲ್ಲಿಸಲಾಗಿದೆ. NICDC ಮೂಲಕ ಕೇಂದ್ರ PPPAC ಸಮಿತಿ ಸಭೆಯ ಅನುಮೋದನೆಗೆ ಬಾಕಿ ಇರುತ್ತದೆ. ಕೇಂದ್ರ ಸರ್ಕಾರದ ಅನುಮೋದನೆ ನಂತರ Master Developer ಆಯ್ಕೆ ಮಾಡಿ, ಪಾರ್ಕ್‌ನ್ನು ಅಭಿವೃದ್ಧಿಪಡಿಸಲಾಗುವುದು.<br><br>ಪಿಎಂ ಮಿತ್ರ ಪಾರ್ಕ್‌ನಲ್ಲಿ 1 ಲಕ್ಷ ನೇರ ಉದ್ಯೋಗ ಹಾಗೂ 2 ಲಕ್ಷ ಪರೋಕ್ಷ ಉದ್ಯೋಗಗಳು ಸೃಜನೆಯಾಗುವ ನಿರೀಕ್ಷೆಯಿದೆ. |

ಸಂಖ್ಯೆ: **CI 284 JAKE 2025**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು